# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 512 |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 21/02/2022 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2014ರಲ್ಲಿ ಪ್ರಾರಂಭವಾದ ಬೀದರ್ ಜಿಲ್ಲೆಯ ಮಹಿಳಾ ಪದವಿ ಮಹಾವಿದ್ಯಾಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಪ್ರಸ್ತುತ ಸದರಿ ಮಹಾವಿದ್ಯಾಲಯವನ್ನು ಒಂದು ಸರ್ಕಾರಿ ಪ್ರೌಢ ಶಾಲೆಯ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಸುತ್ತಿದ್ದು, ಇದಕ್ಕೆ ಮೂಲಭೂತ ಸೌಕರ್ಯ ಇಲ್ಲದೇ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಯುತ್ತಿರುವ ಮಹಿಳಾ ಪದವಿ ಮಹಾವಿದ್ಯಾಲಯಕ್ಕೆ ಕಟ್ಟಡದ ಆಸ್ತಿ ವರ್ಗಾವಣೆ ಮಾಡಿಕೊಡುವ ಯೋಚನೆ ಸರ್ಕಾರದ ಮುಂದಿದೆಯೇ; | ಪ್ರಸ್ತುತ ಸದರಿ ಕಾಲೇಜು ಬೀದರ್ ಪಟ್ಟಣದ ಸರ್ಕಾರಿ ಎಂ.ಪಿ. ಪ್ರೌಢ ಶಾಲೆ ಹೆಸರಿನಲ್ಲಿದ್ದು, ಸದರಿ ಕಟ್ಟಡ/ನಿವೇಶನವನ್ನು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ವರ್ಗಾಯಿಸುವಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯನ್ನು ಕೋರಲಾಗಿದೆ. |
| (ಈ) | ವರ್ಗಾವಣೆ ಮಾಡಿಕೊಡುವುದಾದರೆ ಯಾವ ಕಾಲಮಿತಿಯೊಳಗೆ ಮಾಡಿಕೊಡಲಾಗುವುದು; ಈ ಬಗ್ಗೆ ಕೈಗೊಂಡಿರುವ ಕ್ರಮವೇನು? | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಿಂದ ಅನುಮೋದನೆ ಬಂದ ಕೂಡಲೇ ವರ್ಗಾವಣೆ ಮಾಡಿಕೊಳ್ಳಲಾಗುವುದು. |

ಕಡತ ಸಂಖ್ಯೆ: ಇಡಿ 33 ಹೆಚ್‌ಪಿಸಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು